# All India Radio: Bangalore
# National Bulletin In Kannada
# 30.04.2026 19.35 p.m.

## ಆಕಾಶವಾಣಿ, ಬೆಂಗಳೂರು

## ರಾಷ್ಟ್ರೀಯ ವಾರ್ತೆಗಳು

## 30.04.2026 19.35 p.m.

****************

**ಮುಖ್ಯಾಂಶಗಳು**

1. **ಬುದ್ಧಪೂರ್ಣಿಮೆಯ ಮುನ್ನಾ ದಿನವಾದ ಇಂದು ದೇಶದ ನಾಗರಿಕರಿಗೆ ಶುಭ ಕೋರಿದ ರಾಷ್ಟ್ರಪತಿ ದ್ರೌಪದಿ ಮುರ್ಮು**
2. **ಇಟಲಿಯ ರಕ್ಷಣಾ ಸಚಿವರೊಂದಿಗೆ ಸಚಿವ ರಾಜನಾಥ್ ಸಿಂಗ್ ದ್ವಿಪಕ್ಷೀಯ ಮಾತುಕತೆ**
3. **ಏಪ್ರಿಲ್ ತಿಂಗಳಲ್ಲಿ ದಾಖಲೆಯ 256.1 ಗಿಗಾ ವ್ಯಾಟ್ ವಿದ್ಯುತ್ ಪೂರೈಕೆ– ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ**
4. **ಐಪಿಎಲ್ ಟಿ–20 ಕ್ರಿಕೆಟ್; ರಾಯಲ್ ಚಾಲೆಂಜರ್ಸ್ ಬೆಂಗಳೂರು ವಿರುದ್ಧ ಟಾಸ್ ಗೆದ್ದ ಗುಜರಾತ್ ಟೈಟನ್ಸ್ ಫೀಲ್ಡಿಂಗ್ ಆಯ್ಕೆ**

---

ಬುದ್ಧ ಪೂರ್ಣಿಮೆಯ ಮುನ್ನಾ ದಿನವಾದ ಇಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ದೇಶದ ನಾಗರಿಕರಿಗೆ ಶುಭಾಶಯ ಕೋರಿದ್ದಾರೆ.

ತಮ್ಮ ಸಂದೇಶದಲ್ಲಿ ರಾಷ್ಟ್ರಪತಿಗಳು, ಭಗವಾನ್ ಬುದ್ಧನ ಜನನ, ಜ್ಞಾನೋದಯ ಮತ್ತು ಮಹಾಪರಿನಿರ್ವಾಣದಂತಹ ಯುಗ ಪ್ರವರ್ತಕ ಘಟನೆಗಳನ್ನು ಈ ಪವಿತ್ರ ದಿನ ನೆನಪಿಸುತ್ತದೆ. ಬುದ್ಧನ ಶಾಶ್ವತ ಸಂದೇಶಗಳಾದ ಕರುಣೆ, ಅಹಿಂಸೆ, ಶಾಂತಿ ಮತ್ತು ಜ್ಞಾನವು ಇಡೀ ಮಾನವಕುಲಕ್ಕೆ ಸದಾ ದಾರಿದೀಪವಾಗಲಿವೆ ಎಂದು ಹೇಳಿದ್ದಾರೆ.

ಹಲವು ಸವಾಲುಗಳನ್ನು ಎದುರಿಸುತ್ತಿರುವ ಇಂದಿನ ಜಗತ್ತಿನಲ್ಲಿ, ಭಗವಾನ್ ಬುದ್ಧನ ಬೋಧನೆಗಳು ಪ್ರತಿಯೊಬ್ಬರಿಗೂ ಶಾಂತಿ, ಸಹಿಷ್ಣುತೆ ಮತ್ತು ಪರಸ್ಪರ ಸಾಮರಸ್ಯದ ಹಾದಿಯಲ್ಲಿ ನಡೆಯಲು ಪ್ರೇರಣೆ ನೀಡುತ್ತವೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ಬುದ್ಧನ ಆದರ್ಶಗಳನ್ನು ಅಳವಡಿಸಿಕೊಳ್ಳುವ ಮೂಲಕ ಶಾಂತಿಯುತ, ಒಳಗೊಳ್ಳುವಿಕೆಯ ಮತ್ತು ನ್ಯಾಯಸಮ್ಮತ ಸಮಾಜದ ನಿರ್ಮಾಣಕ್ಕೆ ಕೊಡುಗೆ ನೀಡಲು ನಾಗರಿಕರು ಸಂಕಲ್ಪ ಮಾಡಬೇಕು ಎಂದು ರಾಷ್ಟ್ರಪತಿಗಳು ಕರೆ ನೀಡಿದ್ದಾರೆ.

---

ರಕ್ಷಣಾ ಸಚಿವ ರಾಜನಾಥ್ ಸಿಂಗ್ ನವದೆಹಲಿಯಲ್ಲಿ ಇಂದು ಇಟಲಿ ರಕ್ಷಣಾ ಸಚಿವ ಗೈಡೊ ಕ್ರೋಸೆಟ್ಟೊ ಅವರೊಂದಿಗೆ ಪಶ್ಚಿಮ ಏಷ್ಯಾದ ಪ್ರಸ್ತುತ ಪರಿಸ್ಥಿತಿ ಸೇರಿದಂತೆ ವ್ಯಾಪಕ ಶ್ರೇಣಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಬಗ್ಗೆ ಚರ್ಚಿಸಿದರು.

ಭಾರತದ ಆತ್ಮನಿರ್ಭರ ಉಪಕ್ರಮ ಮತ್ತು ಇಟಲಿಯ ರಕ್ಷಣಾ ಸಹಕಾರ ಉಪಕ್ರಮದಡಿಯಲ್ಲಿ ಪರಸ್ಪರ ಪ್ರಯೋಜನಕಾರಿ ರಕ್ಷಣಾ ಕೈಗಾರಿಕಾ ಸಹಕಾರವನ್ನು ಮತ್ತಷ್ಟು ಅಭಿವೃದ್ಧಿ ಪಡಿಸುವ ಮಾರ್ಗಗಳ ಕುರಿತು ಉಭಯ ನಾಯಕರು ಚರ್ಚಿಸಿದರು ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

ಈ ಸಂದರ್ಭದಲ್ಲಿ ಉಭಯ ದೇಶಗಳ ಸಶಸ್ತ್ರ ಪಡೆಗಳ ನಡುವಿನ ಮಿಲಿಟರಿ ತೊಡಗಿಸಿಕೊಳ್ಳುವಿಕೆಗೆ ಸಂಬಂಧಿಸಿದಂತೆ 'ದ್ವಿಪಕ್ಷೀಯ ಮಿಲಿಟರಿ ಸಹಕಾರ ಯೋಜನೆ 2026–27' ಅನ್ನು ವಿನಿಮಯ ಮಾಡಿಕೊಳ್ಳಲಾಯಿತು.

---

ಏಪ್ರಿಲ್ ತಿಂಗಳಲ್ಲಿ ಯಾವುದೇ ಕೊರತೆ ಇಲ್ಲದೆ, ಗರಿಷ್ಠ 256.1 ಗಿಗಾ ವ್ಯಾಟ್ ವಿದ್ಯುತ್ ಪೂರೈಸುವ ಮೂಲಕ ಭಾರತ ಮಹತ್ವದ ಮೇಲಿಗಲ್ಲು ಸಾಧಿಸಿದೆ ಎಂದು ಕೇಂದ್ರ ನವ ಹಾಗೂ ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ನೀಡಿರುವ ಅವರು, ಈ ಸಾಧನೆಯಲ್ಲಿ ಸೌರ ವಿದ್ಯುತ್ ಪಾತ್ರ ನಿರ್ಣಾಯಕವಾಗಿದ್ದು, ಒಟ್ಟು ಬೇಡಿಕೆಯಲ್ಲಿ ಶೇಕಡ 21 ರಷ್ಟು ವಿದ್ಯುತ್ ಅನ್ನು ಸೌರಶಕ್ತಿಯಿಂದ ಪೂರೈಕೆ ಮಾಡಲಾಗಿದೆ ಎಂದು ಹೇಳಿದ್ದಾರೆ.

ಈ ಅಭಿವೃದ್ಧಿಯು ದೇಶದ ಇಂಧನ ಕ್ಷೇತ್ರದಲ್ಲಿ ರಚನಾತ್ಮಕ ಬದಲಾವಣೆಯನ್ನು ಪ್ರತಿಬಿಂಬಿಸುತ್ತದೆ. ಶುದ್ಧ ಮತ್ತು ನವೀಕರಿಸಬಹುದಾದ ಮೂಲಗಳು, ಇಂಧನ ಭದ್ರತೆಯನ್ನು ಹೆಚ್ಚು ಬಲಪಡಿಸುತ್ತಿವೆ ಹಾಗೂ ಹೆಚ್ಚುತ್ತಿರುವ ಬೇಡಿಕೆಯನ್ನು ಪೂರೈಸುತ್ತಿವೆ ಎಂದು ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ.

---

2026ರ ಮುಂಗಾರು ಹಂಗಾಮಿಗೆ ಅಗತ್ಯಕ್ಕಿಂತ ಹೆಚ್ಚಿನ ಪೂರೈಕೆಯೊಂದಿಗೆ ದೇಶದಲ್ಲಿ ರಸಗೊಬ್ಬರ ಲಭ್ಯತೆ ಸಮರ್ಪಕವಾಗಿದೆ ಎಂದು ಕೇಂದ್ರ ಸರ್ಕಾರ ಭರವಸೆ ನೀಡಿದೆ.

ನವದೆಹಲಿಯಲ್ಲಿ ಇಂದು ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಕೇಂದ್ರ ರಸಗೊಬ್ಬರ ಇಲಾಖೆಯ ಹೆಚ್ಚುವರಿ ಕಾರ್ಯದರ್ಶಿ ಅಪರ್ಣಾ ಶರ್ಮಾ, ದೇಶೀಯ ರಸಗೊಬ್ಬರ ಇಲಾಖೆಯು 62.37 ಎಲ್‌ಎಂಟಿ ತಲುಪಿದ್ದು, ರಸಗೊಬ್ಬರ ಆಮದು ಸುಮಾರು 15.39 ಎಲ್‌ಎಂಟಿಯಷ್ಟಿದೆ. ಪ್ರಸ್ತುತ ಅವಧಿಯಲ್ಲಿ ಒಟ್ಟು ಲಭ್ಯತೆ ಸುಮಾರು 78 ಎಲ್‌ಎಂಟಿಗೆ ಏರಿಕೆಯಾಗಿದೆ ಎಂದು ತಿಳಿಸಿದರು.

38 ಎಲ್‌ಎಂಟಿ ಯೂರಿಯಾ ಮತ್ತು 19 ಎಲ್‌ಎಂಟಿ ಫಾಸ್ಫೇಟಿಕ್ ಮತ್ತು ಪೊಟ್ಯಾಸಿಕ್ ರಸಗೊಬ್ಬರಗಳನ್ನು ಆಮದು ಮಾಡಿಕೊಳ್ಳಲು ಜಾಗತಿಕ ಟೆಂಡರ್ ಕರೆಯಲಾಗಿದೆ. ದೇಶದಲ್ಲಿ ರಸಗೊಬ್ಬರ ಲಭ್ಯತೆ ಸ್ಥಿರವಾಗಿದೆ ಮತ್ತು ಪೂರೈಕೆ ಉತ್ತಮವಾಗಿ ನಿರ್ವಹಿಸಲ್ಪಡುತ್ತಿದೆ ಎಂದು ಅವರು ಮಾಹಿತಿ ನೀಡಿದರು.

---

ದೇಶಾದ್ಯಂತ ಎಲ್‌ಪಿಜಿ, ಪೆಟ್ರೋಲ್ ಮತ್ತು ಡೀಸೆಲ್ ಪೂರೈಕೆ ಸಾಮಾನ್ಯವಾಗಿದೆ. ಯಾವುದೇ ವಿತರಕರು ಎಲ್‌ಪಿಜಿ ಅಥವಾ ಇತರೆ ಇಂಧನದ ಕೊರತೆ ಎದುರಿಸುತ್ತಿಲ್ಲ ಎಂದು ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಸಚಿವಾಲಯದ ಕಾರ್ಯದರ್ಶಿ ಸುಜಾತಾ ಶರ್ಮಾ ತಿಳಿಸಿದ್ದಾರೆ.

ನವದೆಹಲಿಯಲ್ಲಿ ಇಂದು ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆನ್‌ಲೈನ್ ಎಲ್‌ಪಿಜಿ ಬುಕ್ಕಿಂಗ್ ಶೇಕಡ 98ರಷ್ಟು ಹೆಚ್ಚಳವಾಗಿದೆ. ಸುಮಾರು ಶೇಕಡ 93 ರಷ್ಟು ವಿತರಣೆಗಳನ್ನು ಒಟಿಪಿ ಮೂಲಕ ದೃಢೀಕರಿಸಲಾಗಿದೆ. ಸುಮಾರು 43 ಸಾವಿರ ಪಿಎನ್‌ಜಿ ಗ್ರಾಹಕರು, ಸ್ವಯಂ ಪ್ರೇರಿತರಾಗಿ ತಮ್ಮ ಎಲ್‌ಪಿಜಿ ಸಂಪರ್ಕಗಳನ್ನು ಬಿಟ್ಟುಕೊಟ್ಟಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ.

ನಾಗರಿಕರು ಆತಂಕದಿಂದ ಎಲ್‌ಪಿಜಿ ಖರೀದಿ ಮಾಡುವುದನ್ನು ತಪ್ಪಿಸಬೇಕು ಮತ್ತು ಸರ್ಕಾರದ ಅಧಿಕೃತ ಮಾಹಿತಿಯನ್ನು ಮಾತ್ರ ನಂಬಬೇಕು ಎಂದು ಸುಜಾತಾ ಶರ್ಮಾ ಮನವಿ ಮಾಡಿದ್ದಾರೆ.

---

ಕರ್ನಾಟಕದಲ್ಲಿ ಪ್ರಧಾನಮಂತ್ರಿ ಜನವಿಕಾಸ್ ಮತ್ತು ಉಮೀದ್ ಸೇರಿದಂತೆ ಕೇಂದ್ರ ಸರ್ಕಾರದ ವಿವಿಧ ಯೋಜನೆಗಳ ಅನುಷ್ಠಾನ ಕುರಿತು ನವದೆಹಲಿಯಲ್ಲಿಂದು ಕೇಂದ್ರ ಅಲ್ಪಸಂಖ್ಯಾತ ವ್ಯವಹಾರಗಳ ಸಚಿವಾಲಯದ ಕಾರ್ಯದರ್ಶಿ ಅಧ್ಯಕ್ಷತೆಯಲ್ಲಿ ಪರಿಶೀಲನಾ ಸಭೆ ನಡೆಯಿತು.

ಸಭೆಯಲ್ಲಿ ಸಚಿವಾಲಯದ ಕಾರ್ಯದರ್ಶಿ ಡಾ. ಶ್ರೀವತ್ಸ ಕೃಷ್ಣ ಅವರು, ಯೋಜನೆಗಳನ್ನು ರಾಜ್ಯದಲ್ಲಿ ತ್ವರಿತವಾಗಿ ಜಾರಿಗೊಳಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಶಿಕ್ಷಣ, ಕೌಶಲ್ಯಾಭಿವೃದ್ಧಿ, ಮೂಲಸೌಕರ್ಯ ಮತ್ತು ಕಲ್ಯಾಣ ಕಾರ್ಯಕ್ರಮಗಳ ಮೂಲಕ ಅಲ್ಪಸಂಖ್ಯಾತ ಸಮುದಾಯಗಳನ್ನು ಸಬಲೀಕರಣಗೊಳಿಸಲು ಕೇಂದ್ರ ಮತ್ತು ರಾಜ್ಯದ ನಡುವಿನ ಸಮನ್ವಯದ ಮಹತ್ವವನ್ನು ಅವರು ಒತ್ತಿ ಹೇಳಿದ್ದಾರೆ.

---

ಭಾರತದ ಬ್ರಿಕ್ಸ್ ಅಧ್ಯಕ್ಷತೆ 2026ರ ಅಡಿಯಲ್ಲಿ ನಡೆದ ಮೊದಲ ಸಾಂಸ್ಕೃತಿಕ ಕಾರ್ಯಪಡೆಯ ಸಭೆ ದೆಹಲಿಯಲ್ಲಿಂದು ಸಂಪನ್ನಗೊಂಡಿತು.

ಕೇಂದ್ರ ಸಂಸ್ಕೃತಿ ಸಚಿವಾಲಯದ ಕಾರ್ಯದರ್ಶಿ ವಿವೇಕ್ ಅಗರವಾಲ್ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಬ್ರಿಕ್ಸ್ ದೇಶಗಳ ಪ್ರತಿನಿಧಿಗಳು ವರ್ಚುವಲ್ ಮೂಲಕ ಪಾಲ್ಗೊಂಡಿದ್ದರು.

ಭಾರತೀಯ ನಿಯೋಗವನ್ನು ಇಂದಿರಾಗಾಂಧಿ ರಾಷ್ಟ್ರೀಯ ಕಲಾ ಕೇಂದ್ರದ ಸದಸ್ಯ ಕಾರ್ಯದರ್ಶಿ ಡಾ. ಸಚ್ಚಿದಾನಂದ ಜೋಶಿ ಮತ್ತು ಇತರ ಅಧಿಕಾರಿಗಳು ಪ್ರತಿನಿಧಿಸಿದ್ದರು.

ಬ್ರಿಕ್ಸ್ ನ ಭಾರತದ ಅಧ್ಯಕ್ಷತೆಯು ಜನರಿಂದ ಜನರಿಗೆ ವಿನಿಮಯ, ಸಂಸ್ಕೃತಿ, ಮತ್ತು ಕಾರ್ಯತಂತ್ರದ ಸಹಕಾರವನ್ನು ಒತ್ತಿ ಹೇಳುತ್ತದೆ. ಸರ್ಕಾರ ಬ್ರಿಕ್ಸ್ ಸದಸ್ಯ ರಾಷ್ಟ್ರಗಳಲ್ಲಿ ಹಂಚಿಕೆಯ ಪರಂಪರೆ ಹಾಗೂ ಸಾಂಸ್ಕೃತಿಕ ಸಹಯೋಗವನ್ನು ಉತ್ತೇಜಿಸುತ್ತದೆ ಎಂದು ಕೇಂದ್ರ ಸಂಸ್ಕೃತಿ ಸಚಿವಾಲಯ ಸಾಮಾಜಿಕ ಜಾಲತಾಣದಲ್ಲಿ ಹೇಳಿದೆ.

---

ಕೇಂದ್ರ ಗ್ರಾಹಕ ವ್ಯವಹಾರಗಳ ಆಹಾರ ಮತ್ತು ಸಾರ್ವಜನಿಕ ವಿತರಣಾ ಸಚಿವ ಪ್ರಲ್ಹಾದ್ ಜೋಶಿ ನವದೆಹಲಿಯಲ್ಲಿ ಇಂದು ಭಾರತೀಯ ಸೇನೆಯ ಅಧಿಕಾರಿಗಳನ್ನು ಭೇಟಿ ಮಾಡಿದರು.

ಈ ವೇಳೆ, ಸಶಸ್ತ್ರ ಪಡೆಗಳಿಗೆ ಖರೀದಿ ವ್ಯವಸ್ಥೆಯನ್ನು ಬಲಪಡಿಸುವ ಬಗ್ಗೆ ಚರ್ಚೆಗಳು ನಡೆಯಿತು. ಹಂತ–ಹಂತವಾಗಿ ಸಾವಯವ ಪಡಿತರ ಪದಾರ್ಥಗಳ ಪರಿಚಯ, ಅಕ್ಕಿ ಮತ್ತು ಗೋಧಿ ಹಿಟ್ಟಿನಂತಹ 'ಭಾರತ್ ಬ್ರ್ಯಾಂಡ್' ಉತ್ಪನ್ನಗಳ ವಿಸ್ತರಣೆ ಹಾಗೂ ಉತ್ತಮ ಗುಣಮಟ್ಟ ಖಚಿತಪಡಿಸಿಕೊಳ್ಳಲು ಸುಧಾರಿತ ಕ್ರಮ ಹಾಗೂ ಬಾಸುಮತಿ ಅಕ್ಕಿಯ ಹೆಚ್ಚಿನ ಪ್ರಮಾಣದ ಖರೀದಿಯನ್ನು ಇದು ಒಳಗೊಂಡಿದೆ.

ದಕ್ಷ ಪೂರೈಕೆ ಸರಪಳಿಯನ್ನು ಖಚಿತಪಡಿಸಿಕೊಳ್ಳಲು ಸಹಕಾರ ಸಂಘಗಳ ಮೂಲಕ ಖರೀದಿ ಹೆಚ್ಚಿಸುವ ಕುರಿತು ಸಮಾಲೋಚನೆ ನಡೆಸಲಾಯಿತು. ರೈತರನ್ನು ಬೆಂಬಲಿಸುವ ಮತ್ತು ಸುಸ್ಥಿರ ಪದ್ಧತಿಗಳನ್ನು ಉತ್ತೇಜಿಸುವ ಸಶಸ್ತ್ರ ಪಡೆಗಳಿಗೆ ಉತ್ತಮ ಗುಣಮಟ್ಟದ, ಪೌಷ್ಟಿಕಾಂಶದ ಪೂರೈಕೆಯನ್ನು ಖಚಿತಪಡಿಸಿಕೊಳ್ಳಲು ಕೇಂದ್ರ ಸರ್ಕಾರ ಬದ್ಧವಾಗಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ.

---

ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರು ಇಂದು ಜಮ್ಮುವಿನ ತಾವಿ ರೈಲು ನಿಲ್ದಾಣದಿಂದ ವಿಸ್ತೃತ ಶ್ರೀನಗರ–ಜಮ್ಮು ವಂದೇ ಭಾರತ್ ಎಕ್ಸ್ ಪ್ರೆಸ್ ರೈಲು ಸೇವೆಗೆ ಹಸಿರು ನಿಶಾನೆ ತೋರಿಸಿದರು.

ಈ ಹಿಂದೆ ಶ್ರೀನಗರದಿಂದ ಶ್ರೀ ಮಾತಾ ವೈಷ್ಣೋದೇವಿ ಕಟ್ರಾ ವರೆಗೆ ಕಾರ್ಯನಿರ್ವಹಿಸುತ್ತಿದ್ದ ರೈಲು ಈಗ ಜಮ್ಮುವಿನ ತಾವಿವರೆಗೆ ಸಂಚರಿಸಲಿದೆ.

ವಿಸ್ತೃತ ಮಾರ್ಗದಲ್ಲಿ ನಿಯಮಿತ ಸೇವೆಗಳು ಶನಿವಾರದಿಂದ ಪ್ರಾರಂಭವಾಗಲಿವೆ. ರೈಲು ಈಗ 8 ಬೋಗಿಗಳ ಬದಲಿಗೆ 20 ಬೋಗಿಗಳೊಂದಿಗೆ ಕಾರ್ಯ ನಿರ್ವಹಿಸಲಿದ್ದು, ಇದು ಸಾಮರ್ಥ್ಯ, ಸಂಪರ್ಕ ಹಾಗೂ ಸೌಕರ್ಯವನ್ನು ಗಮನಾರ್ಹವಾಗಿ ಹೆಚ್ಚಿಸುತ್ತದೆ. ಪ್ರಯಾಣಿಕರು ಜಮ್ಮು ಮತ್ತು ಶ್ರೀನಗರದ ನಡುವೆ 5 ಗಂಟೆಗಳಿಗಿಂತ ಕಡಿಮೆ ಅವಧಿಯಲ್ಲಿ ಪ್ರಯಾಣಿಸಬಹುದು.

ಸಮಾರಂಭದಲ್ಲಿ ಕೇಂದ್ರ ಸಚಿವ ಜಿತೇಂದ್ರ ಸಿಂಗ್, ಜಮ್ಮು–ಕಾಶ್ಮೀರ ಮುಖ್ಯಮಂತ್ರಿ ಓಮರ್ ಅಬ್ದುಲ್ಲಾ ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ಅಶ್ವಿನಿ ವೈಷ್ಣವ್, ಕಳೆದ 12 ವರ್ಷಗಳಲ್ಲಿ ರೈಲ್ವೆ ವಲಯದಲ್ಲಿ ಗಮನಾರ್ಹ ಪರಿವರ್ತನೆ ಕಂಡುಬಂದಿದೆ. ಜಮ್ಮು ಮತ್ತು ಕಾಶ್ಮೀರದಲ್ಲಿ 370ನೇ ವಿಧಿಯನ್ನು ರದ್ದುಗೊಳಿಸಿದ ನಂತರ ಈ ಪ್ರದೇಶವು ನಿರಂತರ ಅಭಿವೃದ್ಧಿಗೆ ಸಾಕ್ಷಿಯಾಗಿದೆ. ಹೆಚ್ಚುತ್ತಿರುವ ಪ್ರಯಾಣಿಕರ ಬೇಡಿಕೆಯನ್ನು ಗಮನದಲ್ಲಿಟ್ಟುಕೊಂಡು ರೈಲಿನಲ್ಲಿರುವ ಬೋಗಿಗಳ ಸಂಖ್ಯೆಯನ್ನು 8ರಿಂದ 20ಕ್ಕೆ ಹೆಚ್ಚಿಸಲಾಗಿದೆ ಎಂದು ತಿಳಿಸಿದರು.

---

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಐಪಿಎಲ್ ಟಿ–20 ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಗುಜರಾತ್ ಟೈಟನ್ಸ್ ಮುಖಾಮುಖಿಯಾಗಿವೆ.

ಟಾಸ್ ಗೆದ್ದ ಗುಜರಾತ್ ಟೈಟನ್ಸ್ ತಂಡ, ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

---

ಲಂಡನ್‌ನಲ್ಲಿ ಇಂದು ನಡೆದ ಐಟಿಟಿಎಫ್ ವಿಶ್ವ ತಂಡ ಟೇಬಲ್ ಟೆನಿಸ್ ಚಾಂಪಿಯನ್‌ಶಿಪ್‌ನ 7ನೇ ಗುಂಪಿನ ಪಂದ್ಯದಲ್ಲಿ ಭಾರತ ತಂಡ, ಸ್ಲೋವಾಕಿಯಾ ವಿರುದ್ಧ 3–2 ಅಂತರದ ರೋಚಕ ಜಯ ಸಾಧಿಸಿದೆ.

ಈ ಗೆಲುವಿನೊಂದಿಗೆ ಭಾರತ ಅಂಕಪಟ್ಟಿಯಲ್ಲಿ ಅಗ್ರಸ್ಥಾನಕ್ಕೇರಿದ್ದು, ಮುಂದಿನ ಪಂದ್ಯದಲ್ಲಿ ಗ್ವಾಟೆಮಾಲಾ ತಂಡವನ್ನು ಎದುರಿಸಲಿದೆ.

ಭಾರತದ ಪುರುಷರ ಮತ್ತು ಮಹಿಳೆಯರ ಎರಡೂ ತಂಡಗಳು ತಮ್ಮ ಅಂತಿಮ ಗುಂಪಿನ ಪಂದ್ಯಗಳನ್ನು ಮುಂದಿನ ಗುರುವಾರ ಆಡಲಿವೆ.

__________ ಮುಕ್ತಾಯ __________